ಹಿರೇಕೆರೂರು ತಾಲ್ಲೂಕಿನ ಹೊಸ ಬಡಾವಣೆಗಳಿಗೆ ವಿದ್ಯುತ್ ಸಂಪರ್ಕ

272 (306) ಶ್ರೀ ಯು. ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿನಲ್ಲಿ ಎಷ್ಟು ಹೊಸ ಬಡಾವಣೆಗಳಿಗೆ, ಜನತಾ ಕಾಲೋನಿಗಳಿಗೆ ಬೀದಿ ದೀಪದ ಸಂಪರ್ಕ ಕೋರಿ ಅರ್ಜಿ ಬಂದಿದೆ;

ಆ) ಇನ್ನು ಎಷ್ಟು ದಿನಗಳಲ್ಲಿ ಸಂಪರ್ಕ ಕೊಡಲಾಗುವುದು.

ಇ) ಚಿಕ್ಕ ಮಡಬೆ ಪರಿಶಿಷ್ಟ ಜಾತಿ ಕಾಲೋನಿ, ಜಾವಳ್ಳಿ ಜನತಾ ಪ್ಲಾಟ್‌ಗಳಿಗೆ ವಿದ್ಯುತ್ ಸಂಪರ್ಕ ಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಶರಣ ಬಸಪ್ಪ ದರ್ಶನಾಪುರ್ (ಇಂಧನ ರಾಜ್ಯ ಸಚಿವರು) :

ಅ) ಹಿರೇ ಕೆರೂರು ತಾಲ್ಲೂಕಿನಲ್ಲಿ 5 ಜನತಾ ಕಾಲೋನಿಗಳಲ್ಲಿ ಹೆಚ್ಚುವರಿ ಬೀದಿ ದೀಪಗಳನ್ನು ಅಳವಡಿಸಿ ಅರ್ಜಿಗಳು ನೋಂದಾಯಿತವಾಗಿವೆ.

ಆ) ಸಂಬಂಧಿಸಿದ ಗ್ರಾಮ ಪಂಚಾಯ್ತಿಗಳು ಮಂಡಳಿಯ ನಿಯಮಗಳನ್ನು ಸಂಪೂರ್ಣವಾಗಿ ಪಾಲಿಸಿದ ನಂತರ, ಹೆಚ್ಚುವರಿ ಬೀದಿದೀಪಗಳನ್ನು ಅಳವಡಿಸಲಾಗುವುದು.

ಇ) ಚಿಕ್ಕಮಡಬೆ ಪರಿಶಿಷ್ಟ ಜಾತಿ ಕಾಲೋನಿ, ಜಾವಳ್ಳಿ ಜನತಾ ಪ್ಲಾಟ್‌ಗಳಲ್ಲಿ ಹೆಚ್ಚುವರಿ ಬೀದಿದೀಪಗಳನ್ನು ಅಳವಡಿಸಲು ಸಂಬಂಧಿಸಿದ ಗ್ರಾಮ ಪಂಚಾಯ್ತಿಗಳು ಮಂಡಳಿಯ ನಿಯಮಗಳನ್ನು ಸಂಪೂರ್ಣವಾಗಿ ಪಾಲಿಸುವುದು ಅವಶ್ಯಕವಾಗಿದೆ. ಪಾಲಿಸಿದ ನಂತರ ಹೆಚ್ಚುವರಿ ಬೀದಿ ದೀಪಗಳನ್ನು ಅಳವಡಿಸಲಾಗುವುದು.

ಪಡಿತರ ವಿತರಣೆಯಲ್ಲಿ ತಾರತಮ್ಯ

276 (356) ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ

ಅ) ನಗರ ಪ್ರದೇಶ ಹಾಗೂ ಗ್ರಾಮಾಂತರ ಪ್ರದೇಶದ ಪಡಿತರದಾರರಿಗೆ ನಿಡುತ್ತಿರುವ ಅಕ್ಕಿ, ಗೋಧಿ, ಸಕ್ಕರೆ ಮತ್ತು ಸೀಮೆ ಎಣ್ಣೆಗಳಲ್ಲಿ ತಾರತಮ್ಯ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ:

ಆ) ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಜಿ. ಬಸವಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ನಗರ ಪ್ರದೇಶ ಹಾಗೂ ಗ್ರಾಮಾಂತರ ಪ್ರದೇಶನದ ಪಡಿತರ ಚೀಟಿದಾರರಿಗೆ ನೀಡುತ್ತಿರುವ ಅಕ್ಕಿ ಮತ್ತು ಗೋಧಿಯನ್ನು ಯಾವುದೇ ತರನಾದ ತಾರತಮ್ಯ ಇರುವುದಿಲ್ಲ. ಆದರೆ, ಸಕ್ಕರೆ ಮತ್ತು ಸೀಮೆ ಎಣ್ಣೆ ವಿತರಣೆಯ ಪ್ರಮಾಣದಲ್ಲಿ ವ್ಯತ್ಯಾಸವಿದೆ.